# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **1152** |
| ಸದಸ್ಯರ ಹೆಸರು | : | **ಶ್ರೀ. ಭೀಮಾರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** |
| ಉತ್ತರಿಸುವ ದಿನಾಂಕ | : | **18/03/2025** |
| ಉತ್ತರಿಸುವ ಸಚಿವರು | : | **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ ಜಿಲ್ಲೆಯ ಹುಮನಾಬಾದ್ ಪಟ್ಟಣದ ಪುರಸಭೆಯನ್ನು ನಗರಸಭೆಯನ್ನಾಗಿ ಹಾಗೂ ರಾಜೇಶ್ವರ ಗ್ರಾಮ ಪಂಚಾಯಿತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ (ಬಂದಿದ್ದಲ್ಲಿ ಸರ್ಕಾರದ ಮುಂದಿದೆಯೇ; | ಬೀದರ್ ಜಿಲ್ಲೆಯ, ಹುಮನಾಬಾದ ಪುರಸಭೆಯನ್ನು ನಗರಸಭೆಯನ್ನಾಗಿ ಹಾಗೂ ರಾಜೇಶ್ವರ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ.<br><br>2011 ರ ಜನಗಣತಿಯನ್ವಯ ಹುಮನಾಬಾದ ಪುರಸಭೆಯಲ್ಲಿ 44,483 ಜನಸಂಖ್ಯೆ ಮತ್ತು ರಾಜೇಶ್ವರ ಗ್ರಾಮ ಪಂಚಾಯಿತಿಯಲ್ಲಿ 11,179 ಜನಸಂಖ್ಯೆ ಇರುತ್ತದೆ.<br><br>ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರಲ್ಲಿನ ಮಾನದಂಡಗಳನ್ವಯ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರದೇಶದಲ್ಲಿ 2011 ರ ಜನಗಣತಿಯನ್ವಯ 50,000 ಕ್ಕಿಂತ ಹೆಚ್ಚು ಜನಸಂಖ್ಯೆ ಇರಬೇಕಾಗುತ್ತದೆ ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರಲ್ಲಿನ ಮಾನದಂಡಗಳನ್ವಯ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲಾಗುವ ಪ್ರದೇಶದಲ್ಲಿ 2011 ರ ಜನಗಣತಿಯನ್ವಯ 10,000 ದಿಂದ 20,000 ಜನಸಂಖ್ಯೆ ಇರಬೇಕಾಗಿದ್ದು, ದಿನಾಂಕ:19/03/2015 ರ ಸಚಿವ ಸಂಪುಟ ನಿರ್ಣಯದಂತೆ 15,000 ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಪರಿಗಣಿಸಲಾಗಿರುತ್ತದೆ.<br><br>ಆದ್ದರಿಂದ ಈ ಸ್ಥಳೀಯ ಸಂಸ್ಥೆಗಳು ನಗರಸಭೆಯನ್ನಾಗಿ ಹಾಗೂ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ನಿಯಮಾನುಸಾರ ಅರ್ಹವಾಗುವುದಿಲ್ಲ. |
| ಆ | ಇದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಮೇಲ್ದರ್ಜೆಗೇರಿಸದಿರಲು ಕಾರಣವೇನು (ಮಾಹಿತಿ ನೀಡುವುದು); | |
| ಇ | ಸರ್ಕಾರವು ಇವುಗಳನ್ನು ಯಾವಾಗ ನಗರಸಭೆಯಾಗಿ ಮತ್ತು ಪುರಸಭೆಯಾಗಿ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳುವುದು (ಮಾಹಿತಿ ನೀಡುವುದು)? | |

**ಸಂಖ್ಯೆ:ನಅಇ 13 ಎಲ್‌ಸಿಕ್ಯೂ 2025**

(ರಹೀಂ ಖಾನ್)

**ಪೌರಾಡಳಿತ ಹಾಗೂ ಹಜ್ ಸಚಿವರು**